# ಮುರುಘಾಮಠಕ್ಕೆ ಸಚಿವ ಉಮೇಶ್ ಕತ್ತಿ ಭೇಟಿ

**ಚಿತ್ರದುರ್ಗ, ಏ. 22** : ನಗರದ ಶ್ರೀ ಮುರುಘರಾಜೇಂದ್ರ ಬೃಹನ್ಮಠಕ್ಕೆ ಇಂದು ರಾಜ್ಯ ಅರಣ್ಯ, ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಉಮೇಶ್ ಕತ್ತಿ ಭೇಟಿ ನೀಡಿ, ಡಾ. ಶಿವಮೂರ್ತಿ ಮುರುಘಾ ಶರಣರಿಂದ ಆಶೀರ್ವಾದ ಪಡೆದರು.

ನಂತರ ಶ್ರೀಮಠದ ಅನುಭವ ಮಂಟಪ, ಪ್ರಾಚ್ಯವಸ್ತು ಸಂಗ್ರಹಾಲಯವನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮಂಜುನಾಥ್, ಆಹಾರ ನಾಗರೀಕ ಸರಬರಾಜು ಇಲಾಖೆ ಉಪನಿರ್ದೇಶಕ ಮಂಟೇಸ್ವಾಮಿ ಮೊದಲಾದವರಿದ್ದರು.





